**ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ,**
**ಉಡುಪಿ ಜಿಲ್ಲೆ , ಉಡುಪಿ.**

**ಸೆಷನ್ಸ್ ಕೇಸ್ ನಂಃ 31/2015** **ಅಸಾ.8**

**ಚಾಸಾ.13**

| | | |
|---|---|---|
| ಸಾಕ್ಷಿದಾರರ ಹೆಸರು | - | ಮಧು ಟಿ.ಎಸ್. |
| ತಂದೆಯ ಹೆಸರು | - | ಟಿ.ಬಿ.ಸಣ್ಣೇ ಗೌಡ |
| ವಯಸ್ಸು | - | 42 ವರ್ಷ |
| ಉದ್ಯೋಗ | - | ಪೋಲಿಸ್ ನಿರೀಕ್ಷಕರು, ಆಂತರಿಕ ಭದ್ರತಾ ವಿಭಾಗ |
| ವಿಳಾಸ | - | ಚಿಕ್ಕಮಗಳೂರು. |

ದಿನಾಂಕಃ 14.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದ:**

ನಾನು ಸಪ್ಟೆಂಬರ್ 2013 ರಿಂದ 2015 ಮೇ ವರೆಗೆ ಉಡುಪಿ ನಗರ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿನಾಂಕ 28-05-2014 ರಂದು ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ12 ಇವರಿಂದ ಕೈಗೆತ್ತಿಕೊಂಡು ಕಡತ ಪರಿಶೀಲಿಸಿರುತ್ತೇನೆ. ಅದೇ ದಿನ ಬೆಳಿಗ್ಗೆ 11 ಗಂಟೆಗೆ ಉಡುಪಿ ತಾಲೂಕು 76 ನೇ ಬಡಗುಬೆಟ್ಟು ಗ್ರಾಮದ ಕುಕ್ಕಿಕಟ್ಟೆ ಡಯಾನ ಟಾಕೀಸ್ ಬಳಿ ಪಂಚರೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಚಾಸಾ1 ರವರು ತೋರಿಸಿದ ಸ್ಥಳದಲ್ಲಿ ಪಂಚರ ಸಮಕ್ಷಮ ನಿಪಿ-4 ರಂತೆ ಸ್ಥಳ ಮಹಜರು ಮಾಡಿರುತ್ತೇನೆ. ನಿಪಿ-4 ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ1 ರವರ ಮರು ಹೇಳಿಕೆ ದಾಖಲು ಮಾಡಿ ಕೊಂಡಿರುತ್ತೇನೆ ಹಾಗೂ ಚಾಸಾ6 ಇವರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ. ನಂತರ

ಪ್ರಕರಣದಲ್ಲಿ ಒಳಗೊಂಡ ಎಸ್ಟೀಮ್ ಕಾರಿನ ಬಗ್ಗೆ ಮಾಹಿತಿ ಪಡೆಯಲು ಆರ್ ಟಿ ಓ ಮಂಗಳೂರು ಇವರಿಗೆ ಕೋರಿಕೆ ಪತ್ರ ಸಲ್ಲಿಸಿರುತ್ತೇನೆ.

2. ದೂರಿನಲ್ಲಿ ಸದ್ರಿ ವಾಹನದ ನೋಂದಣಿ ಸಂಖ್ಯೆ ತಪ್ಪಾಗಿ ನಮೂದಾಗಿದ್ದು ಅದನ್ನು ಸರಿಪಡಿಸಿಕೊಳ್ಳುವ ಬಗ್ಗೆ ನ್ಯಾಯಾಲಯಕ್ಕೆ ಮನವಿ ಮಾಡಿಕೊಂಡಿರುತ್ತೇನೆ. ದಿನಾಂಕ 02-06-2015 ರಂದು ಈ ಘಟನೆಯ ಬಗ್ಗೆ ಎಸ್.ಪಿ. ಕಚೇರಿಗೆ ಮಾಹಿತಿ ಬಂದಿದ್ದು ಸದ್ರಿ ಮಾಹಿತಿಯಲ್ಲಿ ದಾಖಲು ಮಾಡಿರುವ ಲಾಗ್ ಬುಕ್ ನ್ನು ನಿಸ್ತಂತು ವಿಭಾಗಕ್ಕೆ ಒದಗಿಸುವಂತೆ ಮನವಿ ಮಾಡಿಕೊಂಡಿರುತ್ತೇನೆ. ಅದೇ ದಿನ ಮಂಗಳೂರು ಆರ್.ಟಿ.ಓ ಕಚೇರಿಯಿಂದ ಪ್ರಕರಣದಲ್ಲಿ ಒಳಗೊಂಡ ವಾಹನದ ಬಿ ಎಕ್ಸ್ ಟ್ರಾಕ್ಸ್ ನ್ನು ಪಡೆದುಕೊಂಡಿರುತ್ತೇನೆ. ಸದ್ರಿ ಎಕ್ಸ್ ಟ್ರಾಕ್ಟ್ ಅನ್ನು ನಿಪಿ-7 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು. ಸದ್ರಿ ದಾಖಲೆ ಲಾಗ್ ಬುಕ್ ಅನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದೆ. ಈ ಬಗ್ಗೆ ಚಾಸಾ8 ಇವರ ಹೇಳಿಕೆಯನ್ನು ದಾಖಲು ಮಾಡಿಕೊಂಡಿರುತ್ತೇನೆ. ನಂತರ ಆರೋಪಿತರ ಪತ್ತೆಗಾಗಿ ಸಿಬ್ಬಂದಿಗಳನ್ನು ನೇಮಿಸಿ ಕಳುಹಿಸಿಕೊಟ್ಟಿರುತ್ತೇನೆ. ಅದೇ ದಿನ ಚಾಸಾ7 ಇವರ ಹೇಳಿಕೆಯನ್ನು ದಾಖಲು ಮಾಡಿಕೊಂಡಿರುತ್ತೇನೆ. ದಿನಾಂಕ 27-08-2014 ರಂದು ಸದ್ರಿ ಕಾರನ್ನು ಸಿಬ್ಬಂದಿಗಳು ತಂದು ಹಾಜರುಪಡಿಸಿದ್ದು, ಅದನ್ನು ಪಂಚರ ಸಮಕ್ಷಮದಲ್ಲಿ ನಿಪಿ-1 ರಂತೆ ಮಹಜರು ಬರೆದು ಅಮಾನತ್ತುಪಡಿಸಿಕೊಂಡಿರುತ್ತೇನೆ. ನಿಪಿ-1 ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಸದ್ರಿ ಕಾರನ್ನು ನೋಡಿದಲ್ಲಿ ಗುರುತಿಸುತ್ತೇನೆ. ಕಾರನ್ನು ನೋಡಿ ಗುರುತಿಸುವ ಬಗ್ಗೆ ಆರೋಪಿ ಪರ ವಕೀಲರು ತಕರಾರು ಇಲ್ಲವೆಂದು ತಿಳಿಸಿರುತ್ತಾರೆ.

3. ದಿನಾಂಕ 22-10-2015 ರಂದು ಒಂದನೇ ಆರೋಪಿ ಶಬ್ಬೀರ್ ಈತನು ಜಿಲ್ಲಾ ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನು ಪಡೆದು ಹಾಜರಾದವರನ್ನು ದಸ್ತಗಿರಿ ಮಾಡಿ ಜಾಮೀನಿನ ಮೇಲೆ ಬಿಟ್ಟಿರುತ್ತೇನೆ. ಈ ಬಗ್ಗೆ ದಸ್ತಗಿರಿ ಮಹಜರನ್ನು ತಯಾರಿಸಿದ್ದು ಸದ್ರಿ ಮಹಜರನ್ನು ಆರೋಪಿತರ ಪರ ವಕೀಲರ ಒಪ್ಪಿಗೆಯ ಮೇರೆಗೆ ನಿಪಿ-6 ಎಂದು ಗುರುತಿಸಲಾಯಿತು. ಅದೇ ದಿನ ಸಾಕ್ಷಿಯ ಮರು ಹೇಳಿಕೆಯನ್ನು ದಾಖಲು ಮಾಡಿ ಕೊಂಡಿರುತ್ತೇನೆ. ನ್ಯಾಯಾಲಯದ ಆದೇಶದಂತೆ ಅಮಾನತ್ತುಪಡಿಸಿಕೊಂಡ ವಾಹನವನ್ನು ಸಂಬಂಧಪಟ್ಟ ವಾಹನದ ಮಾಲೀಕರಿಗೆ ಕೊಟ್ಟಿರುತ್ತೇನೆ. ಆರೋಪಿತರ ವಿರುದ್ದ ಸಾಕಷ್ಟು ಸಾಕ್ಷಿ ಪುರಾವೆ ದೊರಕಿದ್ದರಿಂದ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ.

**<u>ಪಾಟೀ ಸವಾಲುಃ 2 ನೇ ಆರೋಪಿ ಪರ ಶ್ರೀ ಎ.ಆರ್.ಆರ್. ವಕೀಲರಿಂದಃ</u>**

ವಾಹನದಿಂದ ಚಾಸಾ1 ರವರನ್ನು ಕೊಲ್ಲಲು ಪ್ರಯತ್ನಪಟ್ಟ ಬಗ್ಗೆ ಸ್ಥಳದಲ್ಲಿ ವಾಹನದ ಯಾವುದೇ ಕುರುಹುಗಳು ಕಂಡುಬಂದಿಲ್ಲ. ಸ್ಥಳ ಪಂಚನಾಮೆಯನ್ನು ಠಾಣೆಯಲ್ಲಿ ತಯಾರಿಸಿದ್ದೇವೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ನಿಪಿ-2 ನ್ನು ನಾವು ಪ್ರಕರಣಕ್ಕಾಗಿ ಸೃಷ್ಟಿ ಮಾಡಿದ್ದೇವೆ ಎಂದರೆ ಸರಿಯಲ್ಲ. ನಾನು ಹೇಳಿದ ರೀತಿಯಲ್ಲಿ ವಾಹನವನ್ನು ವಶಕ್ಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣದ ಆರೋಪಿತರ ಮೇಲೆ ಈ ಹಿಂದೆಯೂ ಸಹಾ ಮಣಿಪಾಲ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು ಎಂದರೆ ಸರಿ. ಆ ಕಾರಣದಿಂದ ಆರೋಪಿತರಿಗೆ ತೊಂದರೆ ಕೊಡಬೇಕು ಎಂದು ಚಾಸಾ1 ರವರ ಕಡೆಯಿಂದ ಸುಳ್ಳು ದೂರನ್ನು ಪಡೆದು ಸುಳ್ಳು ಪ್ರಕರಣ ದಾಖಲಿಸಿದ್ದೇವೆ ಎಂದರೆ ಸರಿಯಲ್ಲ. ಆ ದಿನ ನಾನು ಹೇಳಿದ ರೀತಿ ವಾಹನ ಸದ್ರಿ ಸ್ಥಳಕ್ಕೆ ಬಂದಿಲ್ಲ ಎಂದರೆ ಸರಿಯಲ್ಲ. ಆರೋಪಿತರಿಗೂ ಮತ್ತು ಈ

ತಕ್ಷೀರಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಚಾಸಾ1 ಪೋಲಿಸ್ ಸಿಬ್ಬಂದಿಯಾದ ಕಾರಣ ಸುಳ್ಳು ದೂರನ್ನು ದಾಖಲಿಸಿ ಪ್ರಕರಣ ಮಾಡಿದ್ದೇವೆ ಎಂದರೆ ಸರಿಯಲ್ಲ.

**ಉಳಿದ ಆರೋಪಿತರ ಪರ ವಕೀಲರು ಮೇಲಿನ ಪಾಟಿ ಸವಾಲನ್ನು ಅಳವಡಿಸಿಕೊಂಡಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದರು.

2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉಡುಪಿ.